# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 541(589) |
| ಉತ್ತರಿಸಬೇಕಾದ ದಿನಾಂಕ | 20.02.2024 |
| ಉತ್ತರಿಸಬೇಕಾದವರು | ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯಾದ್ಯಂತ ಇರುವ ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಖಾಸಗಿಯವರು ನಿರ್ಮಾಣ ಮಾಡುವ ಹೊಸ ಬಡಾವಣೆಗಳಿಗೆ ವಿಧಿಸಲಾಗಿರುವ ಮಾನದಂಡಗಳಾವುವು; | ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4(ಎ) ರಡಿ ಸ್ಥಳೀಯ ಯೋಜನಾ ಪ್ರದೇಶ ಘೋಷಣೆಗೊಂಡಿರುವ ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17 ರಡಿಯಲ್ಲಿರುವ ಹಾಗೂ ಅನುಮೋದಿತ ವಲಯ ನಿಯಮಾವಳಿಗಳ ಅವಕಾಶದಂತೆ ಖಾಸಗಿಯವರು ನಿರ್ಮಾಣ ಮಾಡುವ ಹೊಸ ಬಡಾವಣೆಗಳಿಗೆ ಮಾನದಂಡಗಳನ್ನು ನಿಗಧಿಪಡಿಸಲಾಗಿರುತ್ತದೆ.<br><br>ಉಳಿದಂತೆ, ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾಗದಿರುವ ಭಾಗದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-ಕೆ ರಡಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ದಿನಾಂಕ:11-11-2014 ರಂದು ಹೊರಡಿಸಿರುವ ಕೈಪಿಡಿಯನ್ವಯ ವಿನ್ಯಾಸ ಅಭಿವೃದ್ಧಿಗೆ ಮಾನದಂಡಗಳನ್ನು ನಿಗಧಿಪಡಿಸಲಾಗಿರುತ್ತದೆ. |
| ಆ) | ಸರ್ಕಾರ ವಿಧಿಸಿರುವ ಮಾನದಂಡಗಳನ್ನು ಮೀರಿ ಬಡಾವಣೆಗಳನ್ನು ನಿರ್ಮಾಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತವರ ವಿರುದ್ಧ ಏನು ಕ್ರಮಕೈಗೊಳ್ಳಲಾಗಿದೆ? | ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 28 ಬೆಮಪ್ರಾ 2018, ದಿನಾಂಕ:28.08.2019 ಹಾಗೂ ಸುತ್ತೋಲೆ ಸಂಖ್ಯೆ: ನಅಇ 105 ಬೆಮಪ್ರಾ 2018, ದಿನಾಂಕ:16.06.2020ರಲ್ಲಿ ನಗರಾಭಿವೃದ್ಧಿ ಪ್ರಾಧಿಕಾರಗಳು / ಯೋಜನಾ ಪ್ರಾಧಿಕಾರಗಳು ತಮ್ಮ ವ್ಯಾಪ್ತಿಯಲ್ಲಿನ ಅನಧಿಕೃತ ವಿನ್ಯಾಸಗಳನ್ನು ಹಾಗೂ ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಅನಧಿಕೃತ ಕಟ್ಟಡಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ನಿಯಮಿತವಾಗಿ ಸ್ಥಳ ಪರಿಶೀಲನೆ ಮಾಡಿ ಅನಧಿಕೃತ ಬೆಳವಣಿಗೆಗಳು ಕಂಡುಬಂದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961, ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ಹಾಗೂ ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರನ್ವಯ ಕಟ್ಟುನಿಟ್ಟಿನ ಕ್ರಮವಹಿಸಲು ಸೂಚಿಸಲಾಗಿದೆ ಹಾಗೂ ಪ್ರತಿ 3 ತಿಂಗಳುಗಳಿಗೊಮ್ಮೆ ಸರ್ಕಾರಕ್ಕೆ ವರದಿ ಸಲ್ಲಿಸಲು ಸೂಚಿಸಲಾಗಿದೆ. ತಪ್ಪಿದಲ್ಲಿ ಸಂಬಂಧಿಸಿದ ಆಯುಕ್ತರು / ಸದಸ್ಯ ಕಾರ್ಯದರ್ಶಿಗಳು / ಪೌರಾಯುಕ್ತರು / ಮುಖ್ಯಾಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತಿನ ಕ್ರಮ ಜರುಗಿಸಲಾಗುವುದೆಂದು ಸೂಚಿಸಲಾಗಿದೆ. |

ಸಂಖ್ಯೆ :ನಅಇ 21 ಎಲ್ ಸಿಕ್ಯೂ 2024(ಇ)

21/02/2024

**(ಬಿ.ಎಸ್ ಸುರೇಶ)**

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು